## ೪. ಆದರ್ಶ ಶಿಕ್ಷಕ ಸರ್ವೇಪಲ್ಲಿ ರಾಧಾಕೃಷ್ಣನ್

**ಆ] ಕೊಟ್ಟಿರುವ ಪ್ರಶ್ನೆಗಳಿಗೆ ಮೂರು-ನಾಲ್ಕು ವಾಕ್ಯಗಳಲ್ಲಿ ಉತ್ತರಿಸಿ.**

**೧. ಸ್ಟಾಲಿನ್ ಅವರು ರಾಧಾಕೃಷ್ಣನ್ ಅವರ ಬೀಳ್ಕೊಡುಗೆ ಸಮಾರಂಭದಲ್ಲಿ ಏನು ಹೇಳಿದರು?**

**ಉತ್ತರ:** "ನೀವೊಬ್ಬರೇ ನನ್ನನ್ನು ಒಬ್ಬ ಮನುಷ್ಯನಂತೆ ಕಂಡು ವರ್ತಿಸಿದವರು. ನೀವು ನಮ್ಮನ್ನು ಬಿಟ್ಟು ಹೋಗುತ್ತಿರುವಿರಿ. ನನಗೆ ಇದು ದುಃಖ ನೀಡಿದೆ. ನೀವು ಹೆಚ್ಚು ಕಾಲ ಬಾಳಬೇಕೆಂಬುದೇ ನನ್ನಾಸೆ. ನಾನು ಹೆಚ್ಚು ಕಾಲ ಬಾಳುವುದಿಲ್ಲ" ಎಂದು ಸ್ಟಾಲಿನ್ ಅವರು ರಾಧಾಕೃಷ್ಣನ್ ಅವರಿಗೆ ಮಾಸ್ಕೋದಲ್ಲಿ ನೀಡಿದ ಬೀಳ್ಕೊಡುಗೆ ಸಮಾರಂಭದಲ್ಲಿ ಹೇಳಿದರು.

**೨. ರಾಧಾಕೃಷ್ಣನ್ ಅವರ ವಿದ್ಯಾಭ್ಯಾಸ ಎಲ್ಲೆಲ್ಲಿ ನಡೆಯಿತು?**

**ಉತ್ತರ:** ರಾಧಾಕೃಷ್ಣನ್ ಅವರು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣವನ್ನು ತಿರುಪತಿಯ ಹರ್ಮನ್ಸ್ ಬರ್ಗ್ ಮಿಷನರಿ ಶಾಲೆಯಲ್ಲಿ. ಅಲ್ಲಿ ಮುಗಿಸಿದರು. ವೆಲ್ಲೂರಿನ ವೂರ್ಸ್ ಕಾಲೇಜಿನಲ್ಲಿ ಬಿ. ಎ. ಪೂರ್ವದ ಎರಡು ವರ್ಷಗಳ ಕಲಾ ಪದವಿ ಮುಗಿಸಿದರು. ಮದ್ರಾಸಿನ ಕ್ರಿಶ್ಚಿಯನ್ ಕಾಲೇಜಿನಲ್ಲಿ ಬಿ.ಎ. ಪದವಿಗೆ ಸೇರಿದರಲ್ಲದೆ ತತ್ವಶಾಸ್ತ್ರದ ಉತ್ತಮ ವಿದ್ಯಾರ್ಥಿ ಎನಿಸಿ ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾದರು.

**೩. ರಾಧಾಕೃಷ್ಣನ್ ಅವರ ವೇಷಭೂಷಣಗಳ ಬಗ್ಗೆ ಬರೆಯಿರಿ.**

**ಉತ್ತರ:** ರಾಧಾಕೃಷ್ಣನ್ ಅವರ ಬಾಹ್ಯರೂಪ ಎತ್ತರವಾದ ನಿಲುವು, ಬಿಸ್ಕೆಟ್ ಬಣ್ಣದ ರೇಷ್ಮೆಯ ನಿಲುವಂಗಿ, ಬಿಳಿಯ ಪಂಚೆ ಮತ್ತು ರುಮಾಲು ಇವು ಭಾರತೀಯರೆಲ್ಲರಿಗೂ ಪರಿಚಿತ. ಪ್ರಪಂಚದ ಫ್ಯಾಷನ್ ಎಷ್ಟೇ ಬದಲಾದರೂ ರಾಧಾಕೃಷ್ಣನ್ ತಮ್ಮ ವೇಷಭೂಷಣಗಳನ್ನು ಕೊನೆಯವರೆಗೂ ಜತನವಾಗಿ ಉಳಿಸಿಕೊಂಡಿದ್ದರು.

**೪. ಶಿಕ್ಷಣದ ಮಹತ್ತ್ವವನ್ನು ಕುರಿತು ರಾಧಾಕೃಷ್ಣನ್ ಅವರು ಏನು ಹೇಳಿದ್ದಾರೆ?**

**ಉತ್ತರ:** ರಾಧಾಕೃಷ್ಣನ್ ಅವರು ಶಿಕ್ಷಣದ ಮಹತ್ವವನ್ನು ಕುರಿತು "ಶಿಕ್ಷಣವು ಜೀವನದ ಅವಿಭಾಜ್ಯ ಅಂಗ. ಅದು ಮಾನವನನ್ನು ಪರಿಪೂರ್ಣತೆ ಹಾಗೂ ಸುಸಂಸ್ಕೃತಿಯತ್ತ ಒಯ್ಯುವ ಸಾಧನ ಮಾರ್ಗ" ಎಂದು ಹೇಳಿದ್ದಾರೆ.

**೫. ರಾಧಾಕೃಷ್ಣನ್ ಅವರಿಗೆ ಸಂದ ಪ್ರಶಸ್ತಿ ಪುರಸ್ಕಾರಗಳು ಯಾವುವು?**

**ಉತ್ತರ:** ರಾಧಾಕೃಷ್ಣನ್ ಅವರ ಸ್ಮರಣೀಯ ಸೇವೆಯನ್ನು ಗುರುತಿಸಿ ಭಾರತ ಸರ್ಕಾರದ ಅತ್ಯುನ್ನತ ಪ್ರಶಸ್ತಿಯಾದ 'ಭಾರತರತ್ನ' ವನ್ನು ನೀಡಿ ಗೌರವಿಸಲಾಯಿತು. ಬ್ರಸೆಲ್ಸ್‌ನ ಫ್ರಿ ವಿಶ್ವವಿದ್ಯಾಲಯದ ಗೌರವ ಡಾಕ್ಟರೇಟ್ ಪದವಿ, ಭಾರತೀಯ ವಿದ್ಯಾಭವನದ 'ಬ್ರಹ್ಮವಿದ್ಯಾಭಾಸ್ಕರ' 'ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ' ಹೀಗೆ ಅವರಿಗೆ ದೇಶ ವಿದೇಶಗಳ ಹಲವಾರು ಪ್ರಶಸ್ತಿ ಪುರಸ್ಕಾರಗಳು ದೊರಕಿದವು.

**ಇ] ಕೊಟ್ಟಿರುವ ಪ್ರಶ್ನೆಗಳಿಗೆ ಎಂಟು-ಹತ್ತು ವಾಕ್ಯಗಳಲ್ಲಿ ಉತ್ತರಿಸಿ.**

**೧. ರಾಧಾಕೃಷ್ಣನ್ ಅವರು ಅಧ್ಯಾಪಕರಾಗಿ ಸಲ್ಲಿಸಿದ ಸೇವೆಯನ್ನು ಕುರಿತು ವಿವರಿಸಿ.**

**ಉತ್ತರ:** ಮೈಸೂರು ವಿಶ್ವವಿದ್ಯಾನಿಲಯದಲ್ಲಿ ತತ್ತ್ವಶಾಸ್ತ್ರದ ಉಪಪ್ರಾಧ್ಯಾಪಕರಾಗಿ ಹಾಗೂ ಕೋಲ್ಕೊತಾದಲ್ಲಿ (ಹಿಂದಿನ ಕಲ್ಕತ್ತಾ) ಪ್ರಾಧ್ಯಾಪಕರಾಗಿ ಸಲ್ಲಿಸಿದ ಸೇವೆ ಸ್ಮರಣೀಯ. ಅಲ್ಲದೆ ಆಂಧ್ರ, ದೆಹಲಿ, ಬನಾರಸ್ ವಿಶ್ವವಿದ್ಯಾಲಯಗಳಲ್ಲಿ ಕುಲಪತಿಯಾಗಿ ಸೇವೆ ಸಲ್ಲಿಸಿ, ಅವುಗಳ ಪುರೋಭಿವೃದ್ಧಿಗೆ ಶ್ರಮಿಸಿದರು. ಆಕ್ಸ್‌ಫರ್ಡ್ ವಿಶ್ವವಿದ್ಯಾನಿಲದಲ್ಲೂ ಸಂದರ್ಶಕ ಪ್ರಾಧ್ಯಾಪಕರಾಗಿ ಕಾರ್ಯನಿರ್ವಹಿಸಿದರು. ರಾಧಾಕೃಷ್ಣನ್ ಅವರ ಬೋಧನಾ ಶೈಲಿ, ನಿರರ್ಗಳತೆ, ವಿಷಯದ ಮೇಲಿನ ಪ್ರಭುತ್ವ ವಿದ್ಯಾರ್ಥಿಗಳನ್ನು ಬಹುಬೇಗ ಆಕರ್ಷಿಸಿತು. ತಮ್ಮ ಪ್ರಾಧ್ಯಾಪಕತ್ವವನ್ನು ಯಾವಾಗಲೆಂದರೆ ಆವಾಗ ಕಳಚಿ ಏರು ಜವ್ವನದ ಯುವಕರಂತೆ ಹಾಸ್ಯ ವಿನೋದಗಳಲ್ಲಿ ತೊಡಗುತ್ತಿದ್ದರು.

**೨. ರಾಧಾಕೃಷ್ಣನ್ ಅವರಿಗೆ ಮೈಸೂರಿನಲ್ಲಿ ನೀಡಿದ ಬೀಳ್ಕೊಡುಗೆಯ ವಿಶೇಷತೆಯನ್ನು ಕುರಿತು ವಿವರಿಸಿ.**

**ಉತ್ತರ:** ರಾಧಾಕೃಷ್ಣನ್ ಅವರು ಕೋಲ್ಕೊತ ವಿಶ್ವವಿದ್ಯಾಲಯದ ತತ್ತ್ವಶಾಸ್ತ್ರ ಪ್ರಾಧ್ಯಾಪಕರಾಗಿ ನೇಮಕಗೊಂಡಾಗ ಮೈಸೂರಿನಿಂದ ಹೊರಟ ದಿನ ಅವರಿಗೆ ಕೊಟ್ಟಂತಹ ವೈಭವದ ಬೀಳ್ಕೊಡುಗೆ ಯಾವ ಚಕ್ರವರ್ತಿಗೂ ದೊರೆತಿರಲಾರದು. ರಾಧಾಕೃಷ್ಣನ್ ಅವರನ್ನು ಮಹಾರಾಜ ಕಾಲೇಜಿನಿಂದ ರೈಲು ನಿಲ್ದಾಣಕ್ಕೆ ಕರೆದೊಯ್ಯುವಾಗ ಸಾರೋಟಿಗೆ ಕುದುರೆಯನ್ನು ಕಟ್ಟಲಿಲ್ಲ. ಸ್ವತಃ ವಿದ್ಯಾರ್ಥಿಗಳೇ ಎಳೆದೊಯ್ದರು. ರಾಧಾಕೃಷ್ಣನ್ ಅವರಿಗಾಗಿ ಕಾದಿರಿಸಿದ್ದ ಕಂಪಾರ್ಟ್‌ಮೆಂಟನ್ನು, ಒರಗುದಿಂಬು ಹಾಗೂ ರತ್ನಗಂಬಳಿಯನ್ನು ಹಾಸಿ ಮಲಗುವ ಸೀಟನ್ನು, ನೆಲವನ್ನು ಹೂವಿನಿಂದ ಸುಪ್ಪತ್ತಿಗೆಯಂತೆ ಮಾಡಿ ದೈವಮಂದಿರವನ್ನು ಭಕ್ತರು ಅಲಂಕರಿಸುವಂತೆ ಅಲಂಕರಿಸಲಾಗಿತ್ತು. "ರಾಧಾಕೃಷ್ಣನ್ ಅವರಿಗೆ ಜಯವಾಗಲಿ" ಎಂಬ ಕೂಗು ರೈಲ್ವೆ ಸ್ಟೇಷನ್ನಿನ ಆವರಣದಲ್ಲೆಲ್ಲ ಮೊಳಗುತ್ತಿತ್ತು. ಆ ದಿನ ಭಾವೋದ್ರೇಕದಿಂದ ಎಷ್ಟೋ ಜನ ಅತ್ತರು. ವಿದ್ಯಾರ್ಥಿಗಳು ತೋರಿದ ವಿಶ್ವಾಸ ಅವರ ಕಣ್ಣಿನಲ್ಲೂ ನೀರು ತಂದಿತು.

**೩. ಹಿಂದೂ ಧರ್ಮ ಮತ್ತು ತತ್ತ್ವಶಾಸ್ತ್ರದ ಬಗ್ಗೆ ರಾಧಾಕೃಷ್ಣನ್ ಅಭಿಪ್ರಾಯವೇನು? ವಿವರಿಸಿ.**

**ಉತ್ತರ:** ರಾಧಾಕೃಷ್ಣನ್ ಅವರು ಹಿಂದೂ ಧರ್ಮದ ತತ್ತ್ವಶಾಸ್ತ್ರ ಮತ್ತು ಸಾಹಿತ್ಯವನ್ನೆಲ್ಲ ಅಧ್ಯಯನ ಮಾಡಿದರು. ಸ್ವಾಮಿ ವಿವೇಕಾನಂದರ ವಿಚಾರಧಾರೆ ಅವರ ಮನವನ್ನು ಆಕರ್ಷಿಸಿತು. ಅವರು "ಹಿಂದೂ ಧರ್ಮವು ಒಂದು ವೈಚಾರಿಕ ಜೀವನ ಮಾರ್ಗವೆಂದೂ, ನೈತಿಕ ಗುಣಾತ್ಮಕ ವಿಷಯಗಳಿಂದ ಕೂಡಿದ್ದು, ಮಾನವನ ಆಂತರಿಕ ಜೀವನದ ಬಗ್ಗೆ ಪ್ರಾಮುಖ್ಯತೆವುಳ್ಳದ್ದಾಗಿದೆ. ಹಿಂದೂಧರ್ಮವಾಗಲಿ, ವೇದಾಂತವಾಗಲಿ ಅಸತ್ಯವನ್ನು ಹೇಳುವುದಿಲ್ಲ. ಭಾರತೀಯ ಚಿಂತನೆಗಳು ಯಾವುದೋ ವಿಚಿತ್ರ ಮತ್ತು ನಿಗೂಢ ಪರಿಕಲ್ಪನೆಗಳಾಗಿಲ್ಲ, ಜೀವನದ ನಾಡಿಮಿಡಿತಗಳನ್ನು ಸೂಕ್ಷ್ಮಮನಸ್ಸಿನ ಚಿಂತನೆಗಳನ್ನು ತಿಳಿಯಪಡಿಸುವುದಾಗಿದೆ" ಎಂದು ಸರಳವಾಗಿ ಹೇಳಿದರು.

**ಈ] ಕೊಟ್ಟಿರುವ ವಾಕ್ಯಗಳ ಸಂದರ್ಭಸಹಿತ ಸ್ವಾರಸ್ಯವನ್ನು ವಿವರಿಸಿ.**

**೧. "ನೀವೊಬ್ಬರೇ ನನ್ನನ್ನು ಒಬ್ಬ ಮನುಷ್ಯನಂತೆ ಕಂಡು ವರ್ತಿಸಿದವರು"**

**ಉತ್ತರ: ಆಯ್ಕೆ:** ಪಠ್ಯಪುಸ್ತಕ ರಚನಾಸಮಿತಿ ಸಿದ್ಧಪಡಿಸಿರುವ 'ಆದರ್ಶ ಶಿಕ್ಷಕ ಸರ್ವೇಪಲ್ಲಿ ರಾಧಾಕೃಷ್ಣನ್' ಎಂಬ ಗದ್ಯಭಾಗದಿಂದ ಆರಿಸಿಕೊಳ್ಳಲಾಗಿದೆ.

**ಸಂದರ್ಭ:** ಈ ಮಾತನ್ನು ರಷ್ಯಾದ ಅಧ್ಯಕ್ಷರಾಗಿದ್ದ ಸ್ಟಾಲಿನ್ ಅವರು ರಾಧಾಕೃಷ್ಣನ್ ಅವರನ್ನು ಬೀಳ್ಕೊಡುವ ಸಂದರ್ಭದಲ್ಲಿ ಹೇಳಿದರು. ಭಾರತದ ರಾಯಭಾರಿಯಾಗಿದ್ದ ರಾಧಾಕೃಷ್ಣನ್ ಅವರು ಸ್ಟಾಲಿನ್ ಅವರೊಡನೆ ನಡೆದುಕೊಂಡ ರೀತಿಯನ್ನು ಸ್ಮರಿಸುತ್ತಾ ಈ ರೀತಿ ಹೇಳಿದ್ದಾರೆ.

**ಸ್ವಾರಸ್ಯ:** ಸ್ಟಾಲಿನ್ ಅವರ ಈ ಮಾತಿನಲ್ಲಿ ರಾಧಾಕೃಷ್ಣನ್ ಅವರ ಸ್ನೇಹಪರತೆ, ಸನ್ನಡತೆಗಳು ಸ್ವಾರಸ್ಯಪೂರ್ಣವಾಗಿ ವ್ಯಕ್ತವಾಗಿವೆ.

**೨. "ಆರ್ಥಿಕ ಪರಿಸ್ಥಿತಿ ತಮ್ಮ ಸಾಧನೆಯಲ್ಲಿ ನಿವಾರಿಸಲಾಗದ ತೊಡಕೆಂದು ಭಾವಿಸಲಿಲ್ಲ"**

**ಉತ್ತರ: ಆಯ್ಕೆ:** ಪಠ್ಯಪುಸ್ತಕ ರಚನಾ ಸಮಿತಿ ಸಿದ್ಧಪಡಿಸಿರುವ 'ಆದರ್ಶ ಶಿಕ್ಷಕ ಸರ್ವೇಪಲ್ಲಿ ರಾಧಾಕೃಷ್ಣನ್' ಎಂಬ ಗದ್ಯಭಾಗದಿಂದ ಆರಿಸಿಕೊಳ್ಳಲಾಗಿದೆ.

**ಸಂದರ್ಭ:** ರಾಧಾಕೃಷ್ಣನ್ ಅವರು ವಿದ್ಯಾಭ್ಯಾಸ ಮಾಡುತ್ತಿದ್ದಾಗ ಅವರ ಹಣಕಾಸಿನ ಪರಿಸ್ಥಿತಿ ಉತ್ತಮವಾಗಿರಲಿಲ್ಲ. ಆದರೂ ಅದು ಅವರ ಸಾಧನೆಗೆ ಅಡ್ಡಿ ಉಂಟು ಮಾಡಲಿಲ್ಲ. ಮನೆಯ ಜವಾಬ್ದಾರಿ ಹೊತ್ತ ಅವರು ಕಿರಿಯ ಸಹಪಾಠಿಗಳಿಗೆ ಮನೆಯ ಪಾಠ ಹೇಳಿ ಹಣಗಳಿಸುತ್ತಿದ್ದರು. ಬಡತನದಲ್ಲಿದ್ದರೂ ತತ್ತ್ವಶಾಸ್ತ್ರದಲ್ಲಿ ಎಂ.ಎ. ಪದವಿಯನ್ನು ಪಡೆದರು.

**ಸ್ವಾರಸ್ಯ:** ನಾವು ಮನಸ್ಸು ಮಾಡಿದರೆ ಯಾವ ಆರ್ಥಿಕ ಪರಿಸ್ಥಿತಿಯನ್ನು ತೊಡಕೆಂದು ಭಾವಿಸದೆ ಸಾಧನೆ ಮಾಡಬಹುದು ಎಂಬುದು ಇಲ್ಲಿ ಸ್ವಾರಸ್ಯಪೂರ್ಣವಾಗಿದೆ.

**೩. "ಏರು ಜವ್ವನದ ಯುವಕರಂತೆ ಹಾಸ್ಯ ವಿನೋದಗಳಲ್ಲಿ ತೊಡಗುತ್ತಿದ್ದರು"**

**ಉತ್ತರ: ಆಯ್ಕೆ:** ಪಠ್ಯಪುಸ್ತಕ ರಚನಾ ಸಮಿತಿ ಸಿದ್ಧಪಡಿಸಿರುವ 'ಆದರ್ಶ ಶಿಕ್ಷಕ ಸರ್ವೇಪಲ್ಲಿ ರಾಧಾಕೃಷ್ಣನ್' ಎಂಬ ಗದ್ಯಭಾಗದಿಂದ ಆರಿಸಿಕೊಳ್ಳಲಾಗಿದೆ.

**ಸಂದರ್ಭ:** ರಾಧಾಕೃಷ್ಣನ್ ಅವರ ಬೋಧನಾ ಶೈಲಿ, ನಿರರ್ಗಳತೆ, ವಿಷಯದ ಮೇಲಿನ ಪ್ರಭುತ್ವ ವಿದ್ಯಾರ್ಥಿಗಳನ್ನು ಬಹುಬೇಗ ಆಕರ್ಷಿಸಿತು. ಎಂದು ವಿವರಿಸುವ ಸಂದರ್ಭದಲ್ಲಿ ಈ ಮಾತನ್ನು ಹೇಳಲಾಗಿದೆ. ರಾಧಾಕೃಷ್ಣನ್ ಅವರು ತಾವು ಪ್ರಾಧ್ಯಾಪಕ ಎಂಬ ಗತ್ತನ್ನು ತೋರದೆ ವಿದ್ಯಾರ್ಥಿಗಳೊಂದಿಗೆ ಏರು ಜವ್ವನದ ಯುವಕರಂತೆ ಹಾಸ್ಯ ವಿನೋದಗಳಲ್ಲಿ ತೊಡಗುತ್ತಿದ್ದರು.

**ಸ್ವಾರಸ್ಯ:** ವಿದ್ಯಾರ್ಥಿಗಳೊಂದಿಗೆ ರಾಧಾಕೃಷ್ಣನ್ ಅವರ ಸ್ನೇಹಪೂರ್ವಕ ಬಾಂಧವ್ಯ, ನಿರಹಂಕಾರ ಮನೋಭಾವ ಇಲ್ಲಿ ಸ್ವಾರಸ್ಯಪೂರ್ಣವಾಗಿ ವ್ಯಕ್ತವಾಗಿದೆ.

**೪. "ಅಶೋಕನು ಕಳಿಂಗ ಯುದ್ಧದ ಅನಂತರ ಶ್ರೇಷ್ಠ ಮನುಷ್ಯನಾದಂತೆ ನೀವೂ ಆಗುವಿರಿ"**

**ಉತ್ತರ: ಆಯ್ಕೆ:** ಪಠ್ಯಪುಸ್ತಕ ರಚನಾ ಸಮಿತಿ ಸಿದ್ಧಪಡಿಸಿರುವ 'ಆದರ್ಶ ಶಿಕ್ಷಕ ಸರ್ವೇಪಲ್ಲಿ ರಾಧಾಕೃಷ್ಣನ್' ಎಂಬ ಗದ್ಯಭಾಗದಿಂದ ಆರಿಸಿಕೊಳ್ಳಲಾಗಿದೆ.

**ಸಂದರ್ಭ:** ರಷ್ಯಾದ ಅಧ್ಯಕ್ಷರಾಗಿದ್ದ ಸ್ಟಾಲಿನ್ ಅವರು ರಾಧಾಕೃಷ್ಣನ್ ಅವರನ್ನು ಬೀಳ್ಕೊಡುವ ಸಂದರ್ಭದಲ್ಲಿ "ನೀವೊಬ್ಬರೇ ನನ್ನನ್ನು ಒಬ್ಬ ಮನುಷ್ಯನಂತೆ ಕಂಡು ವರ್ತಿಸಿದವರು" ಎಂದು ಹೇಳುತ್ತಾ ತಮಗೆ ಪ್ರಥಮ ಭೇಟಿಯಲ್ಲಿ ರಾಧಾಕೃಷ್ಣನ್ ಅವರು ಹೇಳಿದ ಈ ಮಾತನ್ನು ಸ್ಮರಿಸಿದರು.

**ಸ್ವಾರಸ್ಯ:** ರಾಧಾಕೃಷ್ಣನ್ ಅವರು ಪ್ರಥಮ ಭೇಟಿಯ ಮಾತುಗಳಲ್ಲೇ ಸ್ಟಾಲಿನ್ ಅವರ ಮನಗೆದ್ದಿರುವುದು ಇಲ್ಲಿ ಸ್ವಾರಸ್ಯಪೂರ್ಣವಾಗಿದೆ.

**೫. "ಮಾನವತೆಯೇ ವಿಶ್ವ ಅನುಸರಿಸಬೇಕಾದ ಮಾರ್ಗ"**

**ಉತ್ತರ: ಆಯ್ಕೆ:** ಪಠ್ಯಪುಸ್ತಕ ರಚನಾ ಸಮಿತಿ ಸಿದ್ಧಪಡಿಸಿರುವ 'ಆದರ್ಶ ಶಿಕ್ಷಕ ಸರ್ವೇಪಲ್ಲಿ ರಾಧಾಕೃಷ್ಣನ್' ಎಂಬ ಗದ್ಯಭಾಗದಿಂದ ಆರಿಸಿಕೊಳ್ಳಲಾಗಿದೆ.

**ಸಂದರ್ಭ:** ರಾಧಾಕೃಷ್ಣನ್ ಅವರು ಕೆನಡಾದ ರೇಡಿಯೋ ಭಾಷಣ ಮಾಡುವ ಸಂದರ್ಭದಲ್ಲಿ ಈ ಮಾತನ್ನು ಹೇಳಿದ್ದಾರೆ. ಇಡೀ ವಿಶ್ವದಲ್ಲಿ ಶಾಂತಿ ಸೌಹಾರ್ದತೆ ನೆಲೆಸಬೇಕಾದರೆ ವಿಶ್ವದ ಪ್ರತಿಯೊಬ್ಬರೂ ಮಾನವತೆಯನ್ನು ಅನುಸರಿಸಬೇಕೆಂದು ಅವರು ತಮ್ಮ ಭಾಷಣದಲ್ಲಿ ಹೇಳಿದರು.

**ಸ್ವಾರಸ್ಯ:** ವಿಶ್ವದ ಸರ್ವ ಸಮಸ್ಯೆಗಳಿಗೂ ಮಾನವೀಯತೆ ಇಲ್ಲದಿರುವುದೇ ಕಾರಣ. ಆದ್ದರಿಂದ ಮಾನವೀಯತೆ ಹೊಂದಬೇಕೆಂಬುದು ಇಲ್ಲಿ ಸ್ವಾರಸ್ಯಪೂರ್ಣವಾಗಿದೆ. ಅನುನಾಸಿಕ ಸಂಧಿ